**03 ಅಕ್ಟೋಬರ್ 2017**

**ಶ್ರೀ ಗಣೇಶ್ ಸಹಕಾರಿ ಬ್ಯಾಂಕ್ ಲಿಮಿಟೆಡ್ , ನಾಶಿಕ್, ಮಹಾರಾಷ್ಟ್ರ- ಇದಕ್ಕೆ ನೀಡಿದ್ದ ನಿರ್ದೇಶನಗಳ ಕಾಲಾವಧಿ ವಿಸ್ತರಣೆ**

ಭಾರತೀಯ ರಿಜರ್ವ್ ಬ್ಯಾಂಕ್ ಬ್ಯಾಂಕಿಂಗ್ ನಿಯಂತ್ರಣ ಕಾಯಿದೆ 1949(ಎ ಎ ಸಿ ಎಸ್) ರ ಪ್ರಕರಣ 35 A ಉಪ ವಿಭಾಗ (1) ಜೊತೆಗೆ ಪ್ರಕರಣ 56ರಲ್ಲಿ ದತ್ತವಾಗಿರುವ ಅಧಿಕಾರಗಳನ್ನು ಚಲಾಯಿಸಿ ಶ್ರೀ ಗಣೇಶ್ ಸಹಕಾರಿ ಬ್ಯಾಂಕ್ ಲಿಮಿಟೆಡ್ , ನಾಶಿಕ್, ಮಹಾರಾಷ್ಟ್ರ -ಇದನ್ನು 01 ಏಪ್ರಿಲ್ 2013 ರಂದು ನೀಡಿದ್ದ ಆದೇಶದ ಪ್ರಕಾರ 02 ಏಪ್ರಿಲ್ 2013 ರ ವ್ಯವಹಾರ ಸಮಯದ ನಂತರದಿಂದ ನಿರ್ದೇಶನಗಳಡಿ ಇರಿಸಲಾಗಿತ್ತು. ಹಾಗೂ ಈ ನಿರ್ದೇಶನಗಳ ಸಿಂಧುತ್ವವನ್ನು ಕಾಲಕಾಲಕ್ಕೆ ಸೂಕ್ತ ಮಾರ್ಪಾಡುಗಳೊಂದಿಗೆ ವಿಸ್ತರಿಸಲಾಗಿ ಕಡೆಯ ಬಾರಿ 24 ಮಾರ್ಚ್ 2017 ರ ಆದೇಶದ ಅನ್ವಯ 29 ಸೆಪ್ಟೆಂಬರ್ 2017 ರ ವರೆಗೆ ವಿಸ್ತರಿಸಲಾಗಿತ್ತು.

ಈ ಮೂಲಕ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ ಮೇಲೆ ತಿಳಿಸಿದ ನಿರ್ದೇಶನಗಳ ಸಿಂಧುತ್ವವನ್ನು 25 ಸೆಪ್ಟೆಂಬರ್ 2017 ರಂದು ನೀಡಿದ ಆದೇಶದ ಅನುಸಾರ ಮತ್ತೆ ಆರು ತಿಂಗಳು ಅಂದರೆ 30 ಸೆಪ್ಟೆಂಬರ್ 2018 ರಿಂದ 29 ಮಾರ್ಚ್ 2018 ರ ವರೆಗೆ ವಿಸ್ತರಿಸಲಾಗಿದೆ (ಪರಿಶೀಲನೆಗೆ ಒಳಪಡುತ್ತದೆ).

ನಿರ್ದೇಶನದ ಒಂದು ಪ್ರತಿಯನ್ನು ಬ್ಯಾಂಕ್ ಆವರಣದಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಪ್ರದರ್ಶಿಸಲಾಗಿದೆ.

ಭಾರತೀಯ ರಿಸರ್ವ್ ಬ್ಯಾಂಕಿನಿಂದ ನೀಡಲ್ಪಟ್ಟ ಈ ತಿದ್ದುಪಡಿ ನಿರ್ದೇಶನವು, ಈ ಬ್ಯಾಂಕಿನ ಹಣಕಾಸಿನ ಪರಿಸ್ಥಿತಿಯಲ್ಲಿ ಗಣನೀಯವಾಗಿ ಸುಧಾರಣೆಯಾಗಿ ಭಾರತೀಯ ರಿಸರ್ವ್ ಬ್ಯಾಂಕಿಗೆ ತೃಪ್ತಿದಾಯಕವಾಗಿ ತೋರಿದೆಯೆಂದು ಅರ್ಥೈಸಿಕೊಳ್ಳಬಾರದು.

**ಅಜಿತ್ ಪ್ರಸಾದ್**
ಸಹಾಯಕ ಸಲಹೆಗಾರರು

**ಪತ್ರಿಕಾ ಪ್ರಕಟಣೆ : 2017-2018/910**